# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 395ರಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮಕ್ಕಳ ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು ವಿದ್ಯಾನಿಧಿ ಯೋಜನೆಯನ್ನು ವಿಸ್ತರಿಸಲು ಮತ್ತು ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆ ರೂಪಿಸುವ ಯೋಜನೆಯ ಕುರಿತು– ಆದೇಶ.

**ಓದಲಾಗಿದೆ:**
1. 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-395
2. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರ ಸಂಖ್ಯೆ: ಸಾಆ/ತೆರಿಗೆ-04/ಆಯವ್ಯಯ/2022-23, ದಿನಾಂಕ: 03-06-2022 ಮತ್ತು 19-07-2022.
3. ಸರ್ಕಾರದ ಆದೇಶ ಸಂಖ್ಯೆ: ಆಇ 02 ಬಿಸಿಎಫ್ 2022, ದಿನಾಂಕ: 26-07-2022.

****

**ಪ್ರಸ್ತಾವನೆ:**

2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-395ರಲ್ಲಿ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮಕ್ಕಳ ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು ವಿದ್ಯಾನಿಧಿ ಯೋಜನೆಯನ್ನು ವಿಸ್ತರಿಸಲು ಮತ್ತು ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆ ರೂಪಿಸುವ ಯೋಜನೆಯನ್ನು ಘೋಷಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರು 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-395 ರಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮಕ್ಕಳ ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು ವಿದ್ಯಾನಿಧಿ ಯೋಜನೆಯನ್ನು ವಿಸ್ತರಿಸಲು ಮತ್ತು ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆ ರೂಪಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ಆರ್ಥಿಕ ಇಲಾಖೆಯ ಆದೇಶದಲ್ಲಿ, Post Metric ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಸೇರಿದಂತೆ Yellow Board ಟ್ಯಾಕ್ಸಿ ಚಾಲಕರ ಮಕ್ಕಳ ವಿದ್ಯಾನಿಧಿ ಯೋಜನೆಗೆ ಮತ್ತು ಆಯುಷ್ಮಾನ್ ಭಾರತ್ ಯೋಜನೆಯಡಿ ಸದರಿ ಚಾಲಕರಿಗೆ ಆರೋಗ್ಯ ಗುರುತಿನ ಚೀಟಿಯನ್ನು ಆರೋಗ್ಯ ಸೌಲಭ್ಯ ಯೋಜನೆಯನ್ನು ಅನುಷ್ಠಾನಗೊಳಿಸಲು ರೂ.10.00 ಕೋಟಿಗಳನ್ನು ಸಾದಿಲ್ವಾರು ನಿಧಿಯಿಂದ ಬಿಡುಗಡೆ ಮಾಡಲಾಗಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆ ಹಾಗೂ ಯೋಜನಾ ಇಲಾಖೆಯೊಂದಿಗೆ ಸಮಾಲೋಚಿಸಿ, ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಟಿಡಿ 68 ಟಿಡಿಓ 2022, ಬೆಂಗಳೂರು, ದಿನಾಂಕ:27-07-2022.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-395 ರಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮಕ್ಕಳ ಮೆಟ್ರಿಕ್ ನಂತರದ (Post Metric) ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು "ವಿದ್ಯಾನಿಧಿ" ಯೋಜನೆಯನ್ನು ಮತ್ತು ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆಯನ್ನು ಅನುಷ್ಠಾನಗೊಳಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಿದೆ.

**1) ವಿದ್ಯಾನಿಧಿ ಯೋಜನೆ:**

ಕರ್ನಾಟಕ ರಾಜ್ಯದ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮಕ್ಕಳಿಗೆ 2022-23ನೇ ಸಾಲಿನ ಆರ್ಥಿಕ ವರ್ಷದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಪಟ್ಟಿಯಲ್ಲಿ ವಿವರಿಸಿರುವಂತೆ ವಿದ್ಯಾರ್ಥಿವೇತನವನ್ನು ವಾರ್ಷಿಕ ವಿದ್ಯಾರ್ಥಿವೇತನ (Scholarship) ರೂಪದಲ್ಲಿ ಪಾವತಿಸಲಾಗುವುದು.

ಈ ವಿದ್ಯಾರ್ಥಿವೇತನವನ್ನು ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct Benefit Transfer-DBT) ಪದ್ಧತಿಯ ಮೂಲಕ ಪಾವತಿಸಲಾಗುವುದು.

| ಕ್ರ. ಸಂ. | ಕೋರ್ಸ್‌ನ ಹೆಸರು / ವಿಧಗಳು | ಹುಡುಗರು / ಪುರುಷರು | ಹುಡುಗಿಯರು / ಅನ್ಯ ಲಿಂಗದವರು |
|---|---|---|---|
| 1 | ಪದವಿಯ ಮುಂಚೆ ಪಿ.ಯು.ಸಿ / ಐ.ಟಿ.ಐ. / ಡಿಪ್ಲೋಮಾ | ರೂ.2,500/- | ರೂ.3,000/- |
| 2 | ಎಲ್ಲಾ ಬಿ.ಎ/ ಬಿ.ಎಸ್.ಸಿ/ ಬಿ.ಕಾಂ, ಪದವಿ ಇತ್ಯಾದಿ: (ಎಂ.ಬಿ.ಬಿ.ಎಸ್. / ಬಿ.ಇ. / ಬಿ.ಟೆಕ್ ಮತ್ತು ವೃತ್ತಿಪರ ಕೋರ್ಸ್‌ಗಳನ್ನು ಹೊರತುಪಡಿಸಿ) | ರೂ.5000/- | ರೂ.5500/- |
| 3 | ಎಲ್.ಎಲ್.ಬಿ. / ಪ್ಯಾರ ಮೆಡಿಕಲ್/ ಬಿ.ಫಾರ್ಮ್/ ನರ್ಸಿಂಗ್, ಇತ್ಯಾದಿ., ವೃತ್ತಿಪರ ಕೋರ್ಸ್‌ಗಳು | ರೂ.7500/- | ರೂ.8000/- |
| 4 | ಎಂ.ಬಿ.ಬಿ.ಎಸ್ / ಬಿ.ಇ. / ಬಿ.ಟೆಕ್ ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್‌ಗಳು | ರೂ.10,000/- | ರೂ.11,000/- |

**ಅ) ಅರ್ಹತೆಗಳು:**

1. ಚಾಲಕರು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಥವಾ ಅರ್ಹತೆಯನುಸಾರ ಪರಿಗಣಿಸುವ ಸಂದರ್ಭದಲ್ಲಿ ರಾಜ್ಯದ ಯಾವುದೇ ಪ್ರಾದೇಶಿಕ / ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಮೋಟಾರು ಕ್ಯಾಬ್ ವರ್ಗಗಳ ಸಾರಿಗೆ ವಾಹನಗಳನ್ನು ಚಲಾಯಿಸಲು ಸಾರಥಿ ತಂತ್ರಾಂಶದಲ್ಲಿ ಚಾಲ್ತಿಯಲ್ಲಿರುವ ಚಾಲನಾ ಅನುಜ್ಞಾಪತ್ರ ಹೊಂದಿರುವ 'ಯೆಲ್ಲೋ ಬೋರ್ಡ್ ಟ್ಯಾಕ್ಸಿ' (yellow board taxi) ಚಾಲಕರಾಗಿರಬೇಕು;
3. ಈ ಉದ್ದೇಶಕ್ಕೆ ಚಾಲಕರ "ಕುಟುಂಬ" ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದಲ್ಲಿ ದಾಖಲಾಗಿರುವ ಸದಸ್ಯರು.
4. ಚಾಲಕರ ಮಕ್ಕಳು ಎಸ್.ಎಸ್.ಎಲ್.ಸಿ ಅಥವಾ 10ನೇ ತರಗತಿಯನ್ನು ಪೂರ್ಣಗೊಳಿಸಿದ ನಂತರ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು /ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳವರೆಗೆ ಪ್ರವೇಶವನ್ನು ಪಡೆದಿರಬೇಕು.

**ಆ) ಷರತ್ತುಗಳು / ನಿಬಂಧನೆಗಳು:-**

1. ಚಾಲಕರ ಕುಟುಂಬದ ಎಲ್ಲಾ ಮಕ್ಕಳು ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
2. ಮಕ್ಕಳ ತಂದೆ-ತಾಯಿ ಇಬ್ಬರೂ ಚಾಲಕರಾಗಿದ್ದು, "ಸಾರಥಿ" ತಂತ್ರಾಶದ ದತ್ತಾಂಶದಲ್ಲಿ ದಾಖಲಾಗಿದ್ದಲ್ಲಿ ಈ ಯೋಜನೆಯಲ್ಲಿ ಒಂದು ವಿದ್ಯಾರ್ಥಿವೇತನಕ್ಕೆ ಮಾತ್ರ ಚಾಲಕರ ಮಕ್ಕಳು ಅರ್ಹರಾಗಿರುತ್ತಾರೆ.
3. ಚಾಲಕರ ಕುಟುಂಬದ ವಿದ್ಯಾರ್ಥಿಯು ಇತರೆ ವಿದ್ಯಾರ್ಥಿವೇತನ ಪಡೆಯುತ್ತಿದ್ದರೂ ಸಹ ವಿದ್ಯಾರ್ಥಿವೇತನ ಪಡೆಯುಲು ಅರ್ಹರಿರುತ್ತಾರೆ. (ರೈತ ವಿದ್ಯಾನಿಧಿ ಮತ್ತು ನೇಕಾರ ಮಕ್ಕಳ ವಿದ್ಯಾರ್ಥಿವೇತನ ಪಡೆದುಕೊಂಡ ಮಕ್ಕಳನ್ನು ಹೊರತುಪಡಿಸಿ)
4. Welfare Department (ಕಲ್ಯಾಣ ಇಲಾಖೆಗಳು) ನೀಡುವ ಶುಲ್ಕ ಮರುಪಾವತಿ, ಶುಲ್ಕ ವಿನಾಯಿತಿ ಹಾಗೂ ನಿರ್ವಹಣಾ ವೆಚ್ಚ ಪಡೆದಿರುವ ಚಾಲಕರ ಮಕ್ಕಳು ಸಹ ಅರ್ಹರಿರುತ್ತಾರೆ.
5. ರಾಜ್ಯದ ವಿವಿಧ ಇಲಾಖೆಗಳು ನಿರ್ವಹಿಸುತ್ತಿರುವ ಶೈಕ್ಷಣಿಕ ದತ್ತಾಂಶ, ಸಾರಥಿ ಮತ್ತು ಕುಟುಂಬ ದತ್ತಾಂಶದ ಆಧಾರದ ಮೇಲೆ ಅರ್ಹ ಫಲಾನುಭವಿಗಳನ್ನು ಗುರುತಿಸಿ On Entitlement Basis ಹಾಗೂ ಅರ್ಜಿ ಆಹ್ವಾನಿಸುವ ಮೂಲಕ ಅನುಷ್ಠಾನಗೊಳಿಸತಕ್ಕದ್ದು.
6. ಈ ವಿದ್ಯಾರ್ಥಿವೇತನವನ್ನು ಯಾವುದಾದರೂ ಒಂದು ವಿಧದ ಕೋರ್ಸ್‌ಗೆ ನೀಡಲಾಗುವುದು. ಉದಾಹರಣೆಗೆ, "X" ಎಂಬ ಸ್ನಾತಕೋತ್ತರ ಪದವಿಯನ್ನು ಪೂರೈಸಿದ ನಂತರ Y ಎಂಬ

ಸ್ನಾತಕೋತ್ತರ ಕೋರ್ಸ್‌ಗೆ ವಿದ್ಯಾರ್ಥಿಯು ಪ್ರವೇಶ ಪಡೆದಲ್ಲಿ, ಈ ಕೋರ್ಸ್‌ಗೆ ವಿದ್ಯಾರ್ಥಿವೇತನವನ್ನು ಪಡೆಯಲು ಅರ್ಹವಾಗುವುದಿಲ್ಲ.

**ಇ) ಅನುಷ್ಠಾನ:**

1. ಸಾರಿಗೆ ಆಯುಕ್ತರ ಮಾರ್ಗದರ್ಶನದಲ್ಲಿ ಅನುಷ್ಠಾನಗೊಳಿಸತಕ್ಕದ್ದು.
2. ಚಾಲಕರ ಮಕ್ಕಳ ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು ವಿದ್ಯಾನಿಧಿ ಯೋಜನೆಯನ್ನು NIC ಮತ್ತು ಸೇವಾ ಸಿಂಧು ಸಹಕಾರದೊಂದಿಗೆ ಕುಟುಂಬ ದತ್ತಾಂಶ ಆಧರಿಸಿ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (State Scholarship Portal) ಮತ್ತು DBT ಮೂಲಕ ಅನುಷ್ಠಾನಗೊಳಿಸತಕ್ಕದ್ದು.

II. **ಆರೋಗ್ಯ ಸೌಲಭ್ಯ:**

ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಆರೋಗ್ಯ ಸೌಲಭ್ಯಕ್ಕಾಗಿ ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಕಾರ್ಡ್‌ನ್ನು (Dual card) ಆರೋಗ್ಯ ಇಲಾಖೆಯ (ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್) / ಗ್ರಾಮ-ಒನ್ / ಬೆಂಗಳೂರು-ಒನ್ / ಕರ್ನಾಟಕ-ಒನ್ ಕೇಂದ್ರಗಳ ಸಹಯೋಗದೊಂದಿಗೆ ಒದಗಿಸುವುದು.

ಈ ಯೋಜನೆಗೆ ತಗಲುವ ವೆಚ್ಚವನ್ನು ಮೊದಲು ಸಾದಿಲ್ವಾರು ನಿಧಿ ಲೆಕ್ಕ ಶೀರ್ಷಿಕೆ: "8000-00-224-0-00 Miscellaneous General Service" ರಡಿಯಲ್ಲಿ ಭರಿಸಿ, ನಂತರ 2022-23ನೇ ಸಾಲಿನ ಒಂದನೇ ಕಂತಿನ ಪೂರಕ ಅಂದಾಜುಗಳಲ್ಲಿ ಲೆಕ್ಕ ಶೀರ್ಷಿಕೆ: 2202-80-107-0-07-117 Scholarship to children of Yellow Board Taxi Drivers ರಡಿ ಒದಗಿಸಿ ನಿಧಿಗೆ ಮರು ತುಂಬಲಾಗುವುದು.

ಸಾದಿಲ್ವಾರು ನಿಧಿಯಿಂದ ಹಣವನ್ನು ಪಡೆಯುವಾಗ ಲೆಕ್ಕ ಶೀರ್ಷಿಕೆಗಳನ್ನು ಬಿಲ್ಲಿನ ಮೇಲೆ ಸ್ಪಷ್ಟವಾಗಿ ನಮೂದಿಸತಕ್ಕದ್ದು.

ಸಾದಿಲ್ವಾರು ನಿಧಿಯಿಂದ ಬಿಡುಗಡೆ ಮಾಡಲಾದ ಈ ಹಣವನ್ನು ಪೂರಕ ಅಂದಾಜುಗಳ ಒಂದನೇ ಕಂತಿನಲ್ಲಿ ಒದಗಿಸುವ ಮೂಲಕ ಮರು ತುಂಬುವ ಮೊದಲೇ ಸಾದಿಲ್ವಾರು ನಿಧಿಯಿಂದ ಸೆಳೆದು ಬಳಸಿಕೊಳ್ಳುವ ಜವಾಬ್ದಾರಿ ಇಲಾಖೆಯ ಮುಖ್ಯ ನಿಯಂತ್ರಣಾಧಿಕಾರಿ ಹಾಗೂ ಹಣ ಸೆಳೆಯುವ ಬಟವಾಡೆ ಅಧಿಕಾರಿಯದ್ದಾಗಿರುತ್ತದೆ.

ಸಾದಿಲ್ವಾರು ನಿಧಿಗೆ ಮರು ತುಂಬಲು ಪೂರಕ ಅಂದಾಜುಗಳಲ್ಲಿ ಒದಗಿಸಲಾಗುವ ಮೊತ್ತವನ್ನು ಸೆಳೆಯದಿರುವಂತೆ ಸಾರಿಗೆ ಇಲಾಖೆ ಮತ್ತು ಖಜಾನೆ ಇಲಾಖೆ ನೋಡಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 223 ವೆಚ್ಚ-11/2022, ದಿನಾಂಕ:26-07-2022 ರಲ್ಲಿ ನೀಡಿರುವ ಸಹಮತಿ ಹಾಗೂ ಯೋಜನಾ ಇಲಾಖೆಯ ಹಿಂಬರಹ ಸಂಖ್ಯೆ: PDS HDD/13, 2022, ದಿನಾಂಕ:27-06-2022 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Pushpa V.S.
**(ಪುಷ್ಪ ವಿ .ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಕಾಸಸೌಧ, ಬೆಂಗಳೂರು: ಇವರಿಗೆ ಮುಂದಿನ ಇ-ಗೆಜೆಟ್‌ನಲ್ಲಿ ಪ್ರಕಟಿಸಲು.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) / (ಇ & ಆರ್‌ಎಸ್‌ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398 ಹಾಗೂ ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5359, ಬೆಂಗಳೂರು-560001.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಸಿಆಸುಇ (ಇ-ಆಡಳಿತ), ಬಹುಮಹಡಿಗಳ ಕಟ್ಟಡ ಬೆಂಗಳೂರು.
7. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಟಿಟಿಎಂಸಿ ಸಂಕೀರ್ಣ, ಶಾಂತಿನಗರ, ಬೆಂಗಳೂರು.
8. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
9. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಾಗಡಿ ರಸ್ತೆ, ಬೆಂಗಳೂರು.

**ಪ್ರತಿ:**

1. ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬೆಂಗಳೂರು.
4. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾ ಕಡತ / ಒ.ಡಿ.ಜಿ.ಸಿ.